# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 125 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 13-09-2021 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನ ರಹಿತವಾಗಿ ರಾಜ್ಯದಲ್ಲಿ ಎಷ್ಟು ಪದವಿ ಪೂರ್ವ ಕಾಲೇಜುಗಳು, ಪ್ರೌಢ ಶಾಲೆಗಳು ಮತ್ತು ಪ್ರಾಥಮಿಕ ಶಾಲೆಗಳಿಗೆ ಮಂಜೂರಾತಿ ನೀಡಲಾಗಿದೆಯೇ; | ರಾಜ್ಯದಲ್ಲಿ ಅನುದಾನರಹಿತವಾಗಿ ಮಂಜೂರಾತಿ ನೀಡಿದ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ: 3355<br>ರಾಜ್ಯದಲ್ಲಿ ಅನುದಾನರಹಿತವಾಗಿ ಮಂಜೂರಾತಿ ನೀಡಿದ ಪ್ರೌಢ ಶಾಲೆಗಳ ಸಂಖ್ಯೆ: 7307<br>ರಾಜ್ಯದಲ್ಲಿ ಅನುದಾನರಹಿತವಾಗಿ ಮಂಜೂರಾತಿ ನೀಡಿದ ಪ್ರಾಥಮಿಕ ಶಾಲೆಗಳ ಸಂಖ್ಯೆ: 14758 |
| ಆ) | 1995ರ ವರೆಗೆ ಮಾತ್ರ ಕೆಲವು ಶಾಲಾ ಕಲೇಜುಗಳಿಗೆ ಅನುದಾನ ನೀಡಿದ್ದು, ಇಲ್ಲಿಯವರೆಗೆ ಯಾವುದೇ ಅನುದಾನವನ್ನು ಮಂಜೂರಾತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಏನು ಕ್ರಮ ಕೈಗೊಳ್ಳಲಾಗಿದೆ? | ಹೌದು.<br>1995ರ ನಂತರ ಪ್ರಾರಂಭವಾದ ಅನುದಾನರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರಾದ ಶ್ರೀ ಎಸ್.ಸುರೇಶ್ ಕುಮಾರ್‌ರವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಹಾಗೂ ಹಾಲಿ ಸಭಾಪತಿಯವರಾದ ಶ್ರೀ ಬಸವರಾಜ ಎಸ್. ಹೊರಟ್ಟಿರವರ ಸಮ್ಮುಖದಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಸದರಿ ಸಭೆಯಲ್ಲಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಪ್ರತಿ 5 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು/ ಉಪನ್ಯಾಸಕರುಗಳು/ ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಇಪಿ 122 ಡಿಜಿಡಬ್ಲ್ಯೂ 2021**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.